
7-6-2023
UDAYAVANI - MANIPAL

## ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ

# ಮೊದಲ ಬಾರಿಗೆ ನವೀನ ಎಂಡೋಸ್ಕೋಪಿ ಚಿಕಿತ್ಸೆ



ಮಣಿಪಾಲ, ಜೂ. 6: ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ। ಶಿರನ್ ಶೆಟ್ಟಿ ನೇತೃತ್ವದ ವೈದ್ಯರ ತಂಡ ಡಾ। ಗಣೇಶ್ ಭಟ್, ಡಾ। ಅತಿಶ್ ಶೆಟ್ಟಿ, ಡಾ। ಬಾಲಾಜಿ, ಡಾ। ಸಂದೇಶ್ ಶೇಟ್ (ಅರಿವಳಿಕೆ) ಅವರು ಎಂಡೋಅಲ್ಟ್ರಾಸೌಂಡ್ ಗೈಡೆಡ್ ಗ್ಯಾಸ್ಟ್ರೋಜೆಜುನೋಸ್ಟೋಮಿ ಎಂಬ ಸಂಕೀರ್ಣ ವಿನೂತನ ಎಂಡೋಸ್ಕೋಪಿ ಚಿಕಿತ್ಸೆಕಸ್ತೂರ್ಬಾ ಆಸ್ಪತ್ರೆಮಣಿಪಾಲದಲ್ಲಿ ಇತ್ತೀಚೆಗೆ ನಡೆಸಿದರು.

ಕ್ಯಾನ್ಸರ್‌ನಿಂದಾಗಿ ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆ ಹೊಂದಿರುವ ವ್ಯಕ್ತಿಗೆ ಯಶಸ್ವಿಯಾಗಿ ಈ ಚಿಕಿತ್ಸೆ ನಡೆಸಿದರು. ಈ ವಿಧಾನವು ಶಸ್ತ್ರಚಿಕಿತ್ಸೆಗಿಂತ ಕಡಿಮೆ ಗಾಯವನ್ನುಂಟುಮಾಡುವ ಮತ್ತು ಯಾವುದೇ ಶಸ್ತ್ರಚಿಕಿತ್ಸೆ ನಡೆಸಲು ಸಾಧ್ಯವಾಗದ ರೋಗಿಗಳಿಗೆ ಇದು ಸೂಕ್ತ ವಿಧಾನವಾಗಿದೆ. ಎಂಡೋಸ್ಕೋಪಿಯ ಮರುದಿನವೇ ಆಸ್ಪತ್ರೆಯಿಂದ ಬಿಡುಗಡೆ ಮಾಡಬಹುದು ಮತ್ತು ಇದನ್ನು ಶಸ್ತ್ರಚಿಕಿತ್ಸೆಗಿಂತ ಕಡಿಮೆ ವೆಚ್ಚದಲ್ಲಿ ಮಾಡಬಹುದು.

ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಮತ್ತು ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯೊಂದಿಗೆ ನಿರಂತರ ವಾಂತಿ ಮಾಡುತ್ತಿದ್ದ 55 ವರ್ಷ ವಯಸ್ಸಿನ ಪುರುಷನನ್ನು ಮತ್ತೊಂದು ಆಸ್ಪತ್ರೆಯಿಂದ ಹೆಚ್ಚಿನ ಚಿಕಿತ್ಸೆಗೆ ಮಣಿಪಾಲಕ್ಕೆ ಕಳುಹಿಸಿದ್ದರು. ವೈದ್ಯರ ತಂಡ ಮತ್ತು ರೋಗಿಯ ಸಂಬಂಧಿಕರೊಂದಿಗೆ ಮಾತುಕತೆ ಮತ್ತುಚರ್ಚೆಯಅನಂತರ, ಆಹಾರದ ಸುಲಭ ಮಾರ್ಗಕ್ಕಾಗಿ ಯುಎಸ್ - ಗ್ಯಾಸ್ಟ್ರೋಜೆಜುನೋಸ್ಟೊಮಿ (ಹೊಟ್ಟೆ ಮತ್ತು ಸಣ್ಣ ಕರುಳಿನ ನಡುವಿನ ಸಂಪರ್ಕ) ಎಂಬ ವಿಶಿಷ್ಟ ಎಂಡೋಸ್ಕೋಪಿಕ್ ಚಿಕಿತ್ಸೆ ನಿರ್ವಹಿಸಲು ನಿರ್ಧರಿಸಲಾಯಿತು. ಚಿಕಿತ್ಸೆಯ ಬಳಿಕ ರೋಗಿಯು ಬಾಯಿಯ ಮೂಲಕ ಆಹಾರ ತೆಗೆದುಕೊಳ್ಳಲು ಸಮರ್ಥರಾದರು.

ಹೊಸ ತಂತ್ರಜ್ಞಾನದಿಂದಾಗಿ ವಿವಿಧ ಸಂಕೀರ್ಣ ರೋಗಗಳಿಗೆ ಎಂಡೋಸ್ಕೋಪಿ ಮೂಲಕವೇ ಹೆಚ್ಚಿನ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿದೆ ಮತ್ತು ಇದು ರೋಗಿ ಸ್ನೇಹಿ ಹಾಗೂ ಅತ್ಯಂತ ಕಡಿಮೆ ವೆಚ್ಚದಲ್ಲಿ ನಿರ್ವಹಿಸಬಹುದಾಗಿದೆ. ಗ್ರಾಮೀಣ ಬಡ ರೋಗಿಗಳ ನಿರ್ವಹಣೆಗಾಗಿ ಇಂತಹ ಹೊಸ ಎಂಡೋಸ್ಕೋಪಿ ತಂತ್ರಜ್ಞಾನ ಬಳಸಿಕೊಳ್ಳುವ ಭಾರತದ ಮೊದಲ ವೈದ್ಯಕೀಯ ಕಾಲೇಜು, ಆಸ್ಪತ್ರೆಗಳಲ್ಲಿ ಮಣಿಪಾಲ ಒಂದಾಗಿದೆ ಎಂದು ಡಾ। ಶಿರನ್ ಶೆಟ್ಟಿ, ಮುಖ್ಯ ನಿರ್ವಹಣಾಧಿಕಾರಿ ಡಾ। ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಕನ್ನಡಪ್ರಭ
ಬುಧವಾರ 7.6.2023

# ಕೆಎಂಸಿ: ನೂತನ ಎಂಡೋಸ್ಕೋಪಿ ಚಿಕಿತ್ಸೆ

**ಮಣಿಪಾಲ:** ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಅಪರೂಪದ ಎಂಡೋಲ್ಟ್ರಾಸೌಂಡ್ ಗೈಡೆಡ್ ಗ್ಯಾಸ್ಟ್ರೋಜೆಜುನೋಸ್ಟೋಮಿ ಎಂಬ ಸಂಕೀರ್ಣ ಎಂಡೋಸ್ಕೋಪಿ ಚಿಕಿತ್ಸೆಯನ್ನು ಮಂಗಳವಾರ ನಡೆಸಲಾಗಿದೆ.

ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಮುಖ್ಯಸ್ಥ ಡಾ.ಶಿರನ್ ಶೆಟ್ಟಿ ನೇತೃತ್ವದಲ್ಲಿ ಡಾ.ಗಣೇಶ್ ಭಟ್, ಡಾ.ಅತಿಶ್ ಶೆಟ್ಟಿ, ಡಾ.ಬಾಲಾಜಿ ಮತ್ತು ಡಾ. ಸಂದೇಶ್ ಶೇಟ್ ಅವರು ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಮತ್ತು ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯಿಂದ ನಿರಂತರ ವಾಂತಿ ಆಗುತ್ತಿದ್ದ 55 ವರ್ಷದ ವ್ಯಕ್ತಿಗೆ ಈ ಎಂಡೋಸ್ಕೋಪಿಕ್ ಚಿಕಿತ್ಸೆ ನಡೆಸಿದ್ದು ಯಶಸ್ವಿಯಾಗಿದೆ.

ಆಸ್ಪತ್ರೆಯ ಉಪವೈದ್ಯಕೀಯ ಅಧೀಕ್ಷಕ ಡಾ.ಶಿರನ್ ಶೆಟ್ಟಿ ಅವರು, ಕರಾವಳಿ ಕರ್ನಾಟಕದಲ್ಲಿ ಪ್ರಥಮ ಬಾರಿಗೆ ನಡೆಸಲಾದ ಈ ಚಿಕಿತ್ಸೆ ಬಡ ರೋಗಿಗಳಿಗೆ ಅನುಕೂಲವಾಗಲಿದೆ, ಇಂತಹ ಎಂಡೋಸ್ಕೋಪಿ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಭಾರತದ ಕೆಲವೇ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಕೆಎಂಸಿಯೂ ಒಂದಾಗಿದೆ ಎಂದು ತಿಳಿಸಿದ್ದಾರೆ. ಮಾಹೆಯ ಬೋಧನಾ ಆಸ್ಪತ್ರೆಗಳ ಸಿಇಒ ಡಾ.ಆನಂದ್ ವೇಣುಗೋಪಾಲ್, ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಚಿಕಿತ್ಸೆ ನೀಡಿದ ವೈದ್ಯರ ತಂಡವನ್ನು ಅಭಿನಂದಿಸಿದ್ದಾರೆ.

THE TIMES OF INDIA, MANGALURU
WEDNESDAY, JUNE 7, 2023

# Innovative endoscopy procedure performed

TIMES NEWS NETWORK

**Udupi:** A team of doctors from Kasturba Hospital, Manipal, performed a complex innovative endoscopy procedure called endo-ultrasound guided gastrojejunostomy for a person with gastric outlet obstruction due to underlying cancer. This procedure is less invasive than surgery, and can be performed on patients who are not fit for surgery, stated a release, adding that it was cost-effective, and that patients can be discharged the next day.

A 55-year-old man with pancreatic cancer and gastric outlet obstruction with persistent vomiting was referred from another hospital. After evaluation and discussion with the team and relatives, the doctors decided to perform a unique endoscopic procedure called EUS–gastrojejunostomy (the connection between the stomach and small intestine), for easy passage of food. The patient could tolerate oral feeding after the procedure.

The team of doctors who were part of this procedure included Dr Shiran Shetty, prof and head, Dr Ganesh Bhat, Dr Atish Shetty and Dr Balaji from the department of gastroenterology and hepatology and Dr Sandesh Shet anaesthesiologist

Dr Shetty, also the deputy medical superintendent said, "Due to newer technology more endoscopy procedures can be performed for the treatment of various complex diseases, and are patient-friendly and cost-effective."

ಸುದ್ದಿಗಳು ಪ್ರಾದೇಶಿಕ

# ಕೆ.ಎಂ.ಸಿ ಮಣಿಪಾಲ: ನವೀನ ಎಂಡೋಸ್ಕೋಪಿ (ಈಯುಎಸ್ – ಗ್ಯಾಸ್ಟ್ರೋಜೆಜುನೋಸ್ಟೋಮಿ) ಕಾರ್ಯವಿಧಾನ – ಇದು ರಾಜ್ಯ ಕರಾವಳಿ ಪ್ರದೇಶದಲ್ಲೇ ಮೊದಲು

By **Udupi Bulletin News Desk** - June 6, 2023 0



**ಮಣಿಪಾಲ, ಜೂನ್ 6:** ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ. ಶಿರನ್ ಶೆಟ್ಟಿ ನೇತೃತ್ವದ ವೈದ್ಯರ ತಂಡ ಡಾ. ಗಣೇಶ್ ಭಟ್, ಡಾ. ಅತಿಶ್ ಶೆಟ್ಟಿ, ಡಾ. ಬಾಲಾಜಿ ಮತ್ತು ಡಾ. ಸಂದೇಶ್ ಶೇಟ್ (ಅರಿವಳಿಕೆ) ಇವರುಗಳು ಎಂಡೋಲ್ಟ್ರಾಸೌಂಡ್ ಗೈಡೆಡ್ ಗ್ಯಾಸ್ಟ್ರೋಜೆಜುನೋಸ್ಟೋಮಿ ಎಂಬ ಸಂಕೀರ್ಣ ವಿನೂತನ ಎಂಡೋಸ್ಕೋಪಿ ಕಾರ್ಯವಿಧಾನ (ಶಸ್ತ್ರಚಿಕಿತ್ಸೆ) ಯನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಇತ್ತೀಚೆಗೆ ನಡೆಸಿದರು.

ಕ್ಯಾನ್ಸರ್ ನಿಂದಾಗಿ ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯನ್ನು ಹೊಂದಿರುವ ವ್ಯಕ್ತಿಗೆ ಯಶಸ್ವಿಯಾಗಿ ಈ ಕಾರ್ಯವಿಧಾನ ನಡೆಸಿದರು. ಈ ವಿಧಾನವು ಶಸ್ತ್ರಚಿಕಿತ್ಸೆಗಿಂತ ಕಡಿಮೆ ಆಕ್ರಮಣಕಾರಿಯಾಗಿದೆ ಮತ್ತು ಯಾವುದೇ ಶಸ್ತ್ರಚಿಕಿತ್ಸೆಗೆ ಸರಿಹೊಂದದ ರೋಗಿಗಳಿಗೆ ಇದು ಸೂಕ್ತ ವಿಧಾನವಾಗಿದೆ. ಎಂಡೋಸ್ಕೋಪಿಯ ಮರುದಿನವೇ ಆಸ್ಪತ್ರೆಯಿಂದ ಬಿಡುಗಡೆ ಮಾಡಬಹುದು ಮತ್ತು ಇದನ್ನು ಶಸ್ತ್ರಚಿಕಿತ್ಸೆಗಿಂತ ತುಂಬಾ ಕಡಿಮೆ ವೆಚ್ಚದಲ್ಲಿ ಮಾಡಬಹುದು.

ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಮತ್ತು ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯೊಂದಿಗೆ ನಿರಂತರ ವಾಂತಿ ಆಗುತ್ತಿದ್ದ 55 ವರ್ಷ ವಯಸ್ಸಿನ ಪುರುಷನನ್ನು ಮತ್ತೊಂದು ಆಸ್ಪತ್ರೆಯಿಂದ ಹೆಚ್ಚಿನ ಚಿಕಿತ್ಸೆಗೆ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಕಳುಹಿಸಿದ್ದರು. ಕೆ.ಎಂ.ಸಿ ವೈದ್ಯರ ತಂಡ ಮತ್ತು ರೋಗಿಯ ಸಂಬಂಧಿಕರೊಂದಿಗೆ ಮಾತುಕತೆ ಮತ್ತು ಚರ್ಚೆಯ ನಂತರ, ಆಹಾರದ ಸುಲಭ ಮಾರ್ಗಕ್ಕಾಗಿ ಈ ಯು ಎಸ್ -ಗ್ಯಾಸ್ಟ್ರೋಜೆಜುನೋಸ್ಟೊಮಿ (ಹೊಟ್ಟೆ ಮತ್ತು ಸಣ್ಣ ಕರುಳಿನ ನಡುವಿನ ಸಂಪರ್ಕ) ಎಂಬ ವಿಶಿಷ್ಟವಾದ ಎಂಡೋಸ್ಕೋಪಿಕ್ ವಿಧಾನವನ್ನು ನಿರ್ವಹಿಸಲು ನಿರ್ಧರಿಸಲಾಯಿತು.

ಕಾರ್ಯವಿಧಾನದ ನಂತರ ರೋಗಿಯು ಮೌಖಿಕ ಆಹಾರವನ್ನು ತೆಗೆದುಕೊಳ್ಳಲು ಸಾಧ್ಯವಾಗಿತ್ತು. ಕರ್ನಾಟಕದ ಕರಾವಳಿ ಭಾಗದಲ್ಲಿ ಇದು ಮೊದಲನೆಯದು. ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಮುಖ್ಯಸ್ಥರು ಹಾಗೂ ಉಪ ವೈದ್ಯಕೀಯ ಅಧೀಕ್ಷಕರಾದ ಡಾ. ಶಿರನ್ ಶೆಟ್ಟಿ ಮಾತನಾಡಿ, "ಹೊಸ ತಂತ್ರಜ್ಞಾನದಿಂದಾಗಿ ವಿವಿಧ ಸಂಕೀರ್ಣ ರೋಗಗಳಿಗೆ ಎಂಡೋಸ್ಕೋಪಿ ಕಾರ್ಯವಿಧಾನಗಳ ಮೂಲಕವೇ ಹೆಚ್ಚಿನ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿದೆ ಮತ್ತು ಇದು ರೋಗಿ ಸ್ನೇಹಿ ಹಾಗೂ ಅತ್ಯಂತ ಕಡಿಮೆ ವೆಚ್ಚದಲ್ಲಿ ಇದನ್ನು ನಿರ್ವಹಿಸಬಹುದಾಗಿದೆ.

ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು ಗ್ರಾಮೀಣ ಮಟ್ಟದ ಮತ್ತು ಬಡ ಹಿನ್ನೆಲೆಯ ರೋಗಿಗಳ ನಿರ್ವಹಣೆಗಾಗಿ ಇಂತಹ ಹೊಸ ಎಂಡೋಸ್ಕೋಪಿ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಭಾರತದ ಮೊದಲ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಒಂದಾಗಿದೆ ಎಂದರು. ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಅವರು ಈ ವಿನೂತನ ಪ್ರಕ್ರಿಯೆಯಲ್ಲಿ ತೊಡಗಿರುವ ವೈದ್ಯರು ಮತ್ತು ಸಿಬ್ಬಂದಿಯ ತಂಡವನ್ನು ಶ್ಲಾಘಿಸಿದರು.

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, ಪ್ರಸ್ತುತ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗವು ಪ್ರತಿಷ್ಠಿತ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕೇಂದ್ರಗಳಿಗೆ ಸಮಾನವಾದ ಎಲ್ಲಾ ಪ್ರಮುಖ ಮತ್ತು ಸಂಕೀರ್ಣ ಎಂಡೋಸ್ಕೋಪಿಕ್ ಕಾರ್ಯವಿಧಾನಗಳನ್ನು ನಿರ್ವಹಿಸುತ್ತಿದೆ ಮತ್ತು ಇದರಿಂದ ಕರಾವಳಿ ಮತ್ತು ಮಧ್ಯ ಕರ್ನಾಟಕ ರೋಗಿಗಳಲ್ಲಿ ಹೊಸ ಭರವಸೆಯನ್ನು ನೀಡುತ್ತದೆ ಎಂದು ಹೇಳಿದ್ದಾರೆ.

Friday, July 28, 2023

# Innovative Endoscopy (EUS – gastrojejunsotomy) procedure at Kasturba Medical College and Hospital, Manipal

By Janardhan Kodavoor/Team karavalixpress, - June 6, 2023



Manipal, 6th Jun 2023: A team of doctors from the Department of Gastroenterology and Hepatology – Dr shiran Shetty( Prof and head )Dr Ganesh Bhat , Dr Atish Shetty , Dr Balaji and Dr Sandesh shet (anesthesia) performed a complex innovative endoscopy procedure called- Endoultrasound guided Gastrojejunostomy – GJ for a person with gastric outlet obstruction due to underlying cancer. This procedure is less invasive than surgery and can be done and patients who are not fit for any surgery can be discharged the next day and is very cost-effective

A 55-year-old Gentleman with pancreatic cancer and gastric outlet obstruction with persistent vomiting was referred from another hospital. After evaluation and discussion with the team and relatives, we decided to perform a unique endoscopic procedure called EUS –gastrojejunostomy (the connection between the stomach and small intestine) for easy passage of food. The patient could tolerate oral feeds after the procedure.



This is the first of its kind done in the coastal belt of Karnataka. Dr Shiran Shetty, professor and Head Department of Gastroenterology and Hepatology and Deputy Medical Superintendent said, "Due to newer technology more endoscopy procedures can be done for treatment of various complex diseases and is patient friendly and very cost effective. Kasturba Hospital, Manipal is one of the first medical college hospital in India to utilize newer endoscopy technology for the management of patients from rural and poor backgrounds

Dr Anand Venugopal, Chief Operating Officer, Teaching Hospital MAHE, Manipal praised the team of doctors and staff who were involved in this innovative procedure. Dr Avinash Shetty, Medical Superintendent, Kasturba Hospital, Manipal said, "Currently, the Department of Gastroenterology and Hepatology at Kasturba Hospital, Manipal performs all major and complex endoscopic procedures equivalent to reputed national and international centers and it gives new hopes to the patients of coastal and middle Karnataka.

THE CANARA POST

# Manipal: Innovative Endoscopic Procedure Successfully Conducted at Kasturba Hospital



**Manipal, June 6, 2023:** A skilled medical team comprising Dr. Shiran Shetty, Prof and Head, Dr. Ganesh Bhat, Dr. Atish Shetty, Dr. Balaji, and Dr. Sandesh Shet (Anesthesia) from the Department of Gastroenterology and Hepatology at Kasturba Hospital, Manipal, recently performed a unique endoscopy procedure known as Endoultrasound guided Gastrojejunostomy – GJ.

This procedure was carried out on a patient with gastric outlet obstruction resulting from underlying cancer.

Compared to invasive surgery, this innovative endoscopic technique is less invasive and can be performed on patients who are not suitable candidates for surgical interventions. Additionally, patients undergoing this procedure can be discharged the following day, and it offers a cost-effective alternative.

The medical team was presented with a challenging case involving a 55-year-old individual suffering from pancreatic cancer and gastric outlet obstruction, causing persistent vomiting. After thorough evaluation and extensive discussions with the patient's relatives, the doctors opted to perform a unique endoscopic procedure called EUS-gastrojejunostomy. This procedure aimed to create a connection between the stomach and small intestine, facilitating easier passage of food. Remarkably, the patient was able to tolerate oral feeds after the successful completion of the procedure.

This achievement marks a significant milestone as it is the first of its kind to be performed in the region. Dr. Shiran Shetty, Professor and Head of the Department of Gastroenterology and Hepatology, as well as the Deputy Medical Superintendent, expressed his enthusiasm about the advancements in endoscopy technology, emphasizing its potential to treat various complex diseases in a patient-friendly and cost-effective manner.

Kasturba Hospital, Manipal takes pride in being one of the pioneering medical college hospitals in India to adopt and utilize these cutting-edge endoscopy techniques for the benefit of patients, particularly those from rural and underprivileged backgrounds.

Dr. Anand Venugopal, Chief Operating Officer of Teaching Hospital MAHE, commended the team of doctors and staff members involved in this groundbreaking procedure.

"Currently, the Department of Gastroenterology and Hepatology at Kasturba Hospital, Manipal is at par with reputed national and international centers in performing major and complex endoscopic procedures, instilling new hope in patients from coastal and central Karnataka," stated Dr. Avinash Shetty, Medical Superintendent of Kasturba Hospital, Manipal, in a press statement.

ROOTS INSTITUTE
Graphic Designing

ಕರಾವಳಿ

# ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಮಣಿಪಾಲದಲ್ಲಿ ನವೀನ ಎಂಡೋಸ್ಕೋಪಿ (ಈ ಯು ಎಸ್ - ಗ್ಯಾಸ್ಟ್ರೊಜೆಜುನೋಸ್ಟೋಮಿ) ಕಾರ್ಯವಿಧಾನ - ಇದು ಕರ್ನಾಟಕದ ಕರಾವಳಿ ಪ್ರದೇಶದಲ್ಲಿ ಮೊದಲ ಬಾರಿಗೆ

2 months ago



ಮಣಿಪಾಲ, 6ನೇ ಜೂನ್ 2023: ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ಶಿರನ್ ಶೆಟ್ಟಿ ನೇತೃತ್ವದ ವೈದ್ಯರ ತಂಡ ಡಾ ಗಣೇಶ್ ಭಟ್, ಡಾ.ಅತಿಶ್ ಶೆಟ್ಟಿ, ಡಾ.ಬಾಲಾಜಿ ಮತ್ತು ಡಾ.ಸಂದೇಶ್ ಶೇಟ್ (ಅರಿವಳಿಕೆ) ಇವರುಗಳು ಎಂಡೋಲ್ಟ್ರಾಸೌಂಡ್ ಗೈಡೆಡ್ ಗ್ಯಾಸ್ಟ್ರೋಜೆಜುನೋಸ್ಟೊಮಿ ಎಂಬ ಸಂಕೀರ್ಣ ವಿನೂತನ ಎಂಡೋಸ್ಕೋಪಿ ಕಾರ್ಯವಿಧಾನ (ಶಸ್ತ್ರಚಿಕಿತ್ಸೆ)ವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಇತ್ತೀಚೆಗೆ ನಡೆಸಿದರು. ಕ್ಯಾನ್ಸರ್ ನಿಂದಾಗಿ ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯನ್ನು ಹೊಂದಿರುವ ವ್ಯಕ್ತಿಗೆ ಯಶಸ್ವಿಯಾಗಿ ಈ ಕಾರ್ಯವಿಧಾನ ನಡೆಸಿದರು. ಈ ವಿಧಾನವು ಶಸ್ತ್ರಚಿಕಿತ್ಸೆಗಿಂತ ಕಡಿಮೆ ಆಕ್ರಮಣಕಾರಿಯಾಗಿದೆ ಮತ್ತು ಯಾವುದೇ ಶಸ್ತ್ರಚಿಕಿತ್ಸೆಗೆ ಸರಿಹೊಂದದ ರೋಗಿಗಳಿಗೆ ಇದು ಸೂಕ್ತ ವಿಧಾನವಾಗಿದೆ. ಎಂಡೋಸ್ಕೋಪಿಯ ಮರುದಿನವೇ ಆಸ್ಪತ್ರೆಯಿಂದ ಬಿಡುಗಡೆ ಮಾಡಬಹುದು ಮತ್ತು ಇದನ್ನು ಶಸ್ತ್ರಚಿಕಿತ್ಸೆಗಿಂತ ತುಂಬಾ ಕಡಿಮೆ ವೆಚ್ಚದಲ್ಲಿ ಮಾಡಬಹುದು.





ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಮತ್ತು ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯೊಂದಿಗೆ ನಿರಂತರ ವಾಂತಿ ಆಗುತ್ತಿದ್ದ 55 ವರ್ಷ ವಯಸ್ಸಿನ ಪುರುಷನನ್ನು ಮತ್ತೊಂದು ಆಸ್ಪತ್ರೆಯಿಂದ ಹೆಚ್ಚಿನ ಚಿಕಿತ್ಸೆಗೆ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಕಳುಹಿಸಿದ್ದರು. ನಮ್ಮ ವೈದ್ಯರ ತಂಡ ಮತ್ತು ರೋಗಿಯ ಸಂಬಂಧಿಕರೊಂದಿಗೆ ಮಾತುಕತೆ ಮತ್ತು ಚರ್ಚೆಯ ನಂತರ, ಆಹಾರದ ಸುಲಭ ಮಾರ್ಗಕ್ಕಾಗಿ ಈ ಯು ಎಸ್ -ಗ್ಯಾಸ್ಟ್ರೋಜೆಜುನೋಸ್ಟೊಮಿ (ಹೊಟ್ಟೆ ಮತ್ತು ಸಣ್ಣ ಕರುಳಿನ ನಡುವಿನ ಸಂಪರ್ಕ) ಎಂಬ ವಿಶಿಷ್ಟವಾದ ಎಂಡೋಸ್ಕೋಪಿಕ್ ವಿಧಾನವನ್ನು ನಿರ್ವಹಿಸಲು ನಿರ್ಧರಿಸಲಾಯಿತು. ಕಾರ್ಯವಿಧಾನದ ನಂತರ ರೋಗಿಯು ಮೌಖಿಕ ಆಹಾರವನ್ನು ತೆಗೆದುಕೊಳ್ಳಲು ಸಾಧ್ಯವಾಗಿತ್ತು.

ಕರ್ನಾಟಕದ ಕರಾವಳಿ ಭಾಗದಲ್ಲಿ ಇದು ಮೊದಲನೆಯದು. ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಮುಖ್ಯಸ್ಥರು ಹಾಗೂ ಉಪ ವೈದ್ಯಕೀಯ ಅಧೀಕ್ಷಕರಾದ ಡಾ.ಶಿರನ್ ಶೆಟ್ಟಿ ಮಾತನಾಡಿ, "ಹೊಸ ತಂತ್ರಜ್ಞಾನದಿಂದಾಗಿ ವಿವಿಧ ಸಂಕೀರ್ಣ ರೋಗಗಳಿಗೆ ಎಂಡೋಸ್ಕೋಪಿ ಕಾರ್ಯವಿಧಾನಗಳ ಮೂಲಕವೇ ಹೆಚ್ಚಿನ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿದೆ ಮತ್ತು ಇದು ರೋಗಿ ಸ್ನೇಹಿ ಹಾಗೂ ಅತ್ಯಂತ ಕಡಿಮೆ ವೆಚ್ಚದಲ್ಲಿ ಇದನ್ನು ನಿರ್ವಹಿಸಬಹುದಾಗಿದೆ. ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು ಗ್ರಾಮೀಣ ಮಟ್ಟದ ಮತ್ತು ಬಡ ಹಿನ್ನೆಲೆಯ ರೋಗಿಗಳ ನಿರ್ವಹಣೆಗಾಗಿ ಇಂತಹ ಹೊಸ ಎಂಡೋಸ್ಕೋಪಿ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಭಾರತದ ಮೊದಲ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಒಂದಾಗಿದೆ" ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಅವರು ಈ ವಿನೂತನ ಪ್ರಕ್ರಿಯೆಯಲ್ಲಿ ತೊಡಗಿರುವ ವೈದ್ಯರು ಮತ್ತು ಸಿಬ್ಬಂದಿಯ ತಂಡವನ್ನು ಶ್ಲಾಘಿಸಿದರು. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, "ಪ್ರಸ್ತುತ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗವು ಪ್ರತಿಷ್ಠಿತ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕೇಂದ್ರಗಳಿಗೆ ಸಮಾನವಾದ ಎಲ್ಲಾ ಪ್ರಮುಖ ಮತ್ತು ಸಂಕೀರ್ಣ ಎಂಡೋಸ್ಕೋಪಿಕ್ ಕಾರ್ಯವಿಧಾನಗಳನ್ನು ನಿರ್ವಹಿಸುತ್ತಿದೆ ಮತ್ತು ಇದರಿಂದ ಕರಾವಳಿ ಮತ್ತು ಮಧ್ಯ ಕರ್ನಾಟಕ ರೋಗಿಗಳಲ್ಲಿ ಹೊಸ ಭರವಸೆಯನ್ನು ನೀಡುತ್ತದೆ" ಎಂದು ಹೇಳಿದ್ದಾರೆ.

ವೈದ್ಯಕೀಯ ಅಧೀಕ್ಷಕರು

# ಮಣಿಪಾಲ: ಕೆ.ಎಂ.ಸಿ ಆಸ್ಪತ್ರೆಯಲ್ಲಿ ಕರಾವಳಿ ಕರ್ನಾಟಕದ ಮೊದಲ ಅತ್ಯಾಧುನಿಕ ಎಂಡೋಸ್ಕೋಪಿ ಶಸ್ತ್ರಚಿಕಿತ್ಸೆ ಯಶಸ್ವಿ

June 7, 2023



ಮಣಿಪಾಲ: ಇಲ್ಲಿನ ಕೆ.ಎಂ.ಸಿ ಆಸ್ಪತ್ರೆಯ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ಶಿರನ್ ಶೆಟ್ಟಿ ನೇತೃತ್ವದ ವೈದ್ಯರ ತಂಡ ಡಾ. ಗಣೇಶ್ ಭಟ್, ಡಾ. ಅತಿಶ್ ಶೆಟ್ಟಿ, ಡಾ. ಬಾಲಾಜಿ ಮತ್ತು ಡಾ. ಸಂದೇಶ್ ಶೇಟ್ (ಅರಿವಳಿಕೆ) ಸಹಾಯದೊಂದಿಗೆ ಎಂಡೋಅಲ್ಟ್ರಾಸೌಂಡ್ ಗೈಡೆಡ್ ಗ್ಯಾಸ್ಟ್ರೋಜೆಜುನೋಸ್ಟೋಮಿ ಎಂಬ ಸಂಕೀರ್ಣ ವಿನೂತನ ಎಂಡೋಸ್ಕೋಪಿ ಕಾರ್ಯವಿಧಾನ (ಶಸ್ತ್ರಚಿಕಿತ್ಸೆ)ವನ್ನು ಯಶಸ್ವಿಯಾಗಿ ನಡೆಸಿದರು.

ಕ್ಯಾನ್ಸರ್ ನಿಂದಾಗಿ ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯನ್ನು ಹೊಂದಿರುವ ವ್ಯಕ್ತಿಗೆ ಯಶಸ್ವಿಯಾಗಿ ಈ ಕಾರ್ಯವಿಧಾನ ನಡೆಸಿದರು. ಈ ವಿಧಾನವು ಶಸ್ತ್ರಚಿಕಿತ್ಸೆಗಿಂತ ಕಡಿಮೆ ನೋವುದಾಯಕ ಮತ್ತು ಯಾವುದೇ ಶಸ್ತ್ರಚಿಕಿತ್ಸೆಗೆ ಸರಿಹೊಂದದ ರೋಗಿಗಳಿಗೆ ಇದು ಸೂಕ್ತ ವಿಧಾನವಾಗಿದೆ. ಎಂಡೋಸ್ಕೋಪಿಯ ಮರುದಿನವೇ ಆಸ್ಪತ್ರೆಯಿಂದ ಬಿಡುಗಡೆ ಮಾಡಬಹುದು ಮತ್ತು ಇದನ್ನು ಶಸ್ತ್ರಚಿಕಿತ್ಸೆಗಿಂತ ತುಂಬಾ ಕಡಿಮೆ ವೆಚ್ಚದಲ್ಲಿ ಮಾಡಬಹುದು.




ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಮತ್ತು ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯೊಂದಿಗೆ ನಿರಂತರ ವಾಂತಿ ಆಗುತ್ತಿದ್ದ 55 ವರ್ಷ ವಯಸ್ಸಿನ ಪುರುಷನನ್ನು ಮತ್ತೊಂದು ಆಸ್ಪತ್ರೆಯಿಂದ ಹೆಚ್ಚಿನ ಚಿಕಿತ್ಸೆಗೆ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲಕ್ಕೆ ಕಳುಹಿಸಲಾಗಿತ್ತು. ಇಲ್ಲಿನ ವೈದ್ಯರ ತಂಡ ಮತ್ತು ರೋಗಿಯ ಸಂಬಂಧಿಕರೊಂದಿಗೆ ಮಾತುಕತೆ ಮತ್ತು ಚರ್ಚೆಯ ನಂತರ, ಆಹಾರದ ಸುಲಭ ಮಾರ್ಗಕ್ಕಾಗಿ ಈ ಯು ಎಸ್ -ಗ್ಯಾಸ್ಟ್ರೋಜೆಜುನೋಸ್ಟೊಮಿ (ಹೊಟ್ಟೆ ಮತ್ತು ಸಣ್ಣ ಕರುಳಿನ ನಡುವಿನ ಸಂಪರ್ಕ) ಎಂಬ ವಿಶಿಷ್ಟವಾದ ಎಂಡೋಸ್ಕೋಪಿಕ್ ವಿಧಾನವನ್ನು ನಿರ್ವಹಿಸಲು ನಿರ್ಧರಿಸಲಾಯಿತು. ಕಾರ್ಯವಿಧಾನದ ನಂತರ ರೋಗಿಯು ಮೌಖಿಕ ಆಹಾರವನ್ನು ತೆಗೆದುಕೊಳ್ಳಲು ಸಾಧ್ಯವಾಗಿತ್ತು. ಕರ್ನಾಟಕದ ಕರಾವಳಿ ಭಾಗದಲ್ಲಿ ಇದು ಮೊದಲನೆಯ ಯಶಸ್ವಿ ಶಸ್ತ್ರಚಿಕಿತ್ಸೆಯಾಗಿದೆ.

ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಮುಖ್ಯಸ್ಥರು ಹಾಗೂ ಉಪ ವೈದ್ಯಕೀಯ ಅಧೀಕ್ಷಕ ಡಾ.ಶಿರನ್ ಶೆಟ್ಟಿ ಮಾತನಾಡಿ, ಹೊಸ ತಂತ್ರಜ್ಞಾನದಿಂದಾಗಿ ವಿವಿಧ ಸಂಕೀರ್ಣ ರೋಗಗಳಿಗೆ ಎಂಡೋಸ್ಕೋಪಿ ಕಾರ್ಯವಿಧಾನಗಳ ಮೂಲಕವೇ ಹೆಚ್ಚಿನ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿದೆ. ಇದು ರೋಗಿ ಸ್ನೇಹಿಯಾಗಿದ್ದು ಅತ್ಯಂತ ಕಡಿಮೆ ವೆಚ್ಚದಲ್ಲಿ ಇದನ್ನು ನಿರ್ವಹಿಸಬಹುದಾಗಿದೆ. ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು ಗ್ರಾಮೀಣ ಮಟ್ಟದ ಮತ್ತು ಬಡ ಹಿನ್ನೆಲೆಯ ರೋಗಿಗಳ ನಿರ್ವಹಣೆಗಾಗಿ ಇಂತಹ ಹೊಸ ಎಂಡೋಸ್ಕೋಪಿ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಭಾರತದ ಮೊದಲ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಒಂದಾಗಿದೆ ಎಂದರು.

ಪ್ರಸ್ತುತ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗವು ಪ್ರತಿಷ್ಠಿತ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕೇಂದ್ರಗಳಿಗೆ ಸಮಾನವಾದ ಎಲ್ಲಾ ಪ್ರಮುಖ ಮತ್ತು ಸಂಕೀರ್ಣ ಎಂಡೋಸ್ಕೋಪಿಕ್ ಕಾರ್ಯವಿಧಾನಗಳನ್ನು ನಿರ್ವಹಿಸುತ್ತಿದೆ ಮತ್ತು ಇದರಿಂದ ಕರಾವಳಿ ಮತ್ತು ಮಧ್ಯ ಕರ್ನಾಟಕ ರೋಗಿಗಳಲ್ಲಿ ಹೊಸ ಭರವಸೆಯನ್ನು ನೀಡುತ್ತದೆ ಎಂದು ಮಾಹಿತಿ ನೀಡಿದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಅವರು ಈ ವಿನೂತನ ಪ್ರಕ್ರಿಯೆಯಲ್ಲಿ ತೊಡಗಿರುವ ವೈದ್ಯರು ಮತ್ತು ಸಿಬ್ಬಂದಿಯ ತಂಡವನ್ನು ಶ್ಲಾಘಿಸಿದರು.

HT ಕನ್ನಡ

# Udupi News: ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ನವೀನ ಮಾದರಿಯ ಎಂಡೋಸ್ಕೋಪಿ; ಕರಾವಳಿಯಲ್ಲೇ ಮೊದಲು



ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ (ಎಡಚಿತ್ರ)

HT Kannada Desk • HT Kannada
Jun 07, 2023 09:56 PM IST

Kasturba Medical College And Hospital: ಕ್ಯಾನ್ಸರ್‌ನಿಂದಾಗಿ ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆ ಹೊಂದಿರುವ ವ್ಯಕ್ತಿಗೆ ಯಶಸ್ವಿಯಾಗಿ ಈ ಕಾರ್ಯವಿಧಾನ ಮೂಲಕ ಚಿಕಿತ್ಸೆ ನಡೆಸಲಾಯಿತು. ಈ ವಿಧಾನವು ಶಸ್ತ್ರಚಿಕಿತ್ಸೆಯನ್ನು ಮಾಡುವ ಬದಲು ಬಳಸಬಹುದು. ಯಾವುದೇ ಶಸ್ತ್ರಚಿಕಿತ್ಸೆಗೆ ಸರಿಹೊಂದದ ರೋಗಿಗಳಿಗೆ ಇದು ಸೂಕ್ತ ವಿಧಾನವಾಗಿದೆ.

**ಉಡುಪಿ:** ಜಿಲ್ಲೆಯ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ (Kasturba Medical College And Hospital) ನವೀನ ಮಾದರಿಯ ಎಂಡೋಸ್ಕೋಪಿ (ಈಯುಎಸ್ - ಗ್ಯಾಸ್ಟ್ರೊಜೆಜುನೊಸ್ಟೊಟಮಿ) ಕಾರ್ಯವಿಧಾನ ಕಾರ್ಯರೂಪಕ್ಕೆ ಬಂದಿದ್ದು, ಇದು ಕರ್ನಾಟಕದ ಕರಾವಳಿ ಪ್ರದೇಶದಲ್ಲಿ ಮೊದಲ ಬಾರಿಗೆ ಅನುಷ್ಠಾನವಾಗಿದೆ.

ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ಶಿರನ್ ಶೆಟ್ಟಿ ನೇತೃತ್ವದ ವೈದ್ಯರ ತಂಡ ಡಾ ಗಣೇಶ್ ಭಟ್, ಡಾ.ಅತಿಶ್ ಶೆಟ್ಟಿ, ಡಾ.ಬಾಲಾಜಿ ಮತ್ತು ಡಾ.ಸಂದೇಶ್ ಶೇಟ್ (ಅರಿವಳಿಕೆ) ಎಂಡೋಲ್ಟ್ರಾಸೌಂಡ್ ಗೈಡೆಡ್ ಗ್ಯಾಸ್ಟ್ರೋಜೆಜುನೋಸ್ಟೋಮಿ ಎಂಬ ವಿನೂತನ ಎಂಡೋಸ್ಕೋಪಿ ಕಾರ್ಯವಿಧಾನ (ಶಸ್ತ್ರಚಿಕಿತ್ಸೆ)ವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಇತ್ತೀಚೆಗೆ ನಡೆಸಿ ಯಶಸ್ವಿಯಾಗಿದ್ದಾರೆ.

ಕ್ಯಾನ್ಸರ್‌ನಿಂದಾಗಿ ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆ ಹೊಂದಿರುವ ವ್ಯಕ್ತಿಗೆ ಯಶಸ್ವಿಯಾಗಿ ಈ ಕಾರ್ಯವಿಧಾನ ಮೂಲಕ ಚಿಕಿತ್ಸೆ ನಡೆಸಲಾಯಿತು. ಈ ವಿಧಾನವು ಶಸ್ತ್ರಚಿಕಿತ್ಸೆಯನ್ನು ಮಾಡುವ ಬದಲು ಬಳಸಬಹುದು. ಯಾವುದೇ ಶಸ್ತ್ರಚಿಕಿತ್ಸೆಗೆ ಸರಿಹೊಂದದ ರೋಗಿಗಳಿಗೆ ಇದು ಸೂಕ್ತ ವಿಧಾನವಾಗಿದೆ. ಎಂಡೋಸ್ಕೋಪಿಯ ಮರುದಿನವೇ ಆಸ್ಪತ್ರೆಯಿಂದ ಬಿಡುಗಡೆ ಮಾಡಬಹುದು. ಶಸ್ತ್ರಚಿಕಿತ್ಸೆಗಿಂತ ತುಂಬಾ ಕಡಿಮೆ ವೆಚ್ಚದಲ್ಲಿ ಮಾಡಬಹುದು. ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಮತ್ತು ಗ್ಯಾಸ್ಟ್ರಿಕ್ ಔಟ್ಲೆಟ್ ಅಡಚಣೆಯೊಂದಿಗೆ ನಿರಂತರ ವಾಂತಿ ಆಗುತ್ತಿದ್ದ 55 ವರ್ಷ ವಯಸ್ಸಿನ ಪುರುಷನನ್ನು ಮತ್ತೊಂದು ಆಸ್ಪತ್ರೆಯಿಂದ ಹೆಚ್ಚಿನ ಚಿಕಿತ್ಸೆಗೆ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಕಳುಹಿಸಿದ್ದರು. ವೈದ್ಯರ ತಂಡ ಮತ್ತು ರೋಗಿಯ ಸಂಬಂಧಿಕರೊಂದಿಗೆ ಮಾತುಕತೆ ಮತ್ತು ಚರ್ಚೆಯ ನಂತರ, ಈಯುಎಸ್ -ಗ್ಯಾಸ್ಟ್ರೋಜೆಜುನೋಸ್ಟೋಮಿ (ಹೊಟ್ಟೆ ಮತ್ತು ಸಣ್ಣ ಕರುಳಿನ ನಡುವಿನ ಸಂಪರ್ಕ) ಎಂಬ ವಿಶಿಷ್ಟವಾದ ಎಂಡೋಸ್ಕೋಪಿಕ್ ವಿಧಾನವನ್ನು ನಿರ್ವಹಿಸಲು ನಿರ್ಧರಿಸಲಾಯಿತು. ಕಾರ್ಯವಿಧಾನದ ನಂತರ ರೋಗಿಯು ಮೌಖಿಕ ಆಹಾರವನ್ನು ತೆಗೆದುಕೊಳ್ಳಲು ಸಾಧ್ಯವಾಗಿತ್ತು.

ಕರ್ನಾಟಕದ ಕರಾವಳಿ ಭಾಗದಲ್ಲಿ ಇದು ಮೊದಲನೆಯದ್ದಾಗಿದೆ. ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗದ ಮುಖ್ಯಸ್ಥರು ಹಾಗೂ ಉಪ ವೈದ್ಯಕೀಯ ಅಧೀಕ್ಷಕರಾದ ಡಾ.ಶಿರನ್ ಶೆಟ್ಟಿ ಈ ಕುರಿತು ಮಾತನಾಡಿ, "ಹೊಸ ತಂತ್ರಜ್ಞಾನದಿಂದಾಗಿ ವಿವಿಧ ಸಂಕೀರ್ಣ ರೋಗಗಳಿಗೆ ಎಂಡೋಸ್ಕೋಪಿ ಕಾರ್ಯವಿಧಾನಗಳ ಮೂಲಕವೇ ಹೆಚ್ಚಿನ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿದೆ. ಇದು ರೋಗಿಸ್ನೇಹಿ ಹಾಗೂ ಅತ್ಯಂತ ಕಡಿಮೆ ವೆಚ್ಚದಲ್ಲಿ ಇದನ್ನು ನಿರ್ವಹಿಸಬಹುದಾಗಿದೆ. ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು ಗ್ರಾಮೀಣ ಮಟ್ಟದ ಮತ್ತು ಬಡ ಹಿನ್ನೆಲೆಯ ರೋಗಿಗಳ ನಿರ್ವಹಣೆಗಾಗಿ ಇಂತಹ ಹೊಸ ಎಂಡೋಸ್ಕೋಪಿ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಭಾರತದ ಮೊದಲ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಒಂದಾಗಿದೆ" ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಅವರು ಈ ವಿನೂತನ ಪ್ರಕ್ರಿಯೆಯಲ್ಲಿ ತೊಡಗಿರುವ ವೈದ್ಯರು ಮತ್ತು ಸಿಬ್ಬಂದಿಯ ತಂಡವನ್ನು ಶ್ಲಾಘಿಸಿದ್ದಾರೆ. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, "ಪ್ರಸ್ತುತ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ವಿಭಾಗವು ಪ್ರತಿಷ್ಠಿತ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕೇಂದ್ರಗಳಿಗೆ ಸಮಾನವಾದ ಎಲ್ಲಾ ಪ್ರಮುಖ ಮತ್ತು ಸಂಕೀರ್ಣ ಎಂಡೋಸ್ಕೋಪಿಕ್ ಕಾರ್ಯವಿಧಾನಗಳನ್ನು ನಿರ್ವಹಿಸುತ್ತಿದೆ" ಎಂದು ತಿಳಿಸಿದ್ದಾರೆ.